VOLUME: 16 | 08 MAY 2026 | ಶುಕ್ರವಾರ | RS: 2 | PAGE: 06 ISSUE: 91
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ತಮಿಳುನಾಡು ರಾಜಕೀಯದಲ್ಲಿ ದಳಪತಿ ವಿಜಯ್ ಗೆಲುವು ಸಖತ್ ಕ್ರೇಜ್ ಹುಟ್ಟುಹಾಕಿದೆ. ದಶಕಗಳ ಇತಿಹಾಸ ಹೊಂದಿರುವ ಡಿಎಂಕೆ ಮತ್ತು ಎಐಎಡಿಎಂಕೆಯಂತಹ ಪ್ರಬಲ ಪಕ್ಷಗಳನ್ನು ಹಿಂದಿಕ್ಕಿ ಗೆಲುವಿನ ಪತಾಕೆ ಹಾರಿಸಿದ್ದಾಗಿದೆ. ಈ ರಾಜಕೀಯ ವಿಜಯೋತ್ಸವದ ಸಮಯದಲ್ಲಿ ಎಲ್ಲರ ಗಮನ ಸೆಳೆಯುತ್ತಿರುವ ಮತ್ತೊಂದು ಹೆಸರು 'ತ್ರಿಷಾ'.



BHARATHA SARATHI
KANNADA DAILY NEWS PAPER
CALL 9740160669

# ಭಾರತ ಸಾರಥಿ

RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ಬಿಎಸ್‌ವೈ ಅದ್ದೂರಿ ಪುರಪ್ರವೇಶ

ಚಿತ್ರದುರ್ಗ: ರೈತ ನಾಯಕ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಅಭಿಮಾನೋತ್ಸವವು ಇಲ್ಲಿ ನಡೆಯಲಿದ್ದು, ಬಿಎಸ್‌ವೈ ಅವರನ್ನು ಇಲ್ಲಿಗೆ ಆತ್ಮೀಯವಾಗಿ ಸ್ವಾಗತಿಸಲಾಯಿತು.

ತೆರೆದ ವಾಹನದಲ್ಲಿ ಮೆರವಣಿಗೆಯುದ್ದಕ್ಕೂ ಯಡಿಯೂರಪ್ಪನವರಿಗೆ ಜಯವಾಗಲಿ; ಭಾರತ್ ಮಾತಾ ಕಿ ಜೈ, ವಿಜಯಣ್ಣನಿಗೆ ಜಯವಾಗಲಿ– ಇವೇ ಮೊದಲಾದ ಘೋಷಣೆಗಳನ್ನು ಕೂಗಲಾಯಿತು. ಯಡಿಯೂರಪ್ಪ ಅವರು ವೇದಿಕೆಗೆ ಆಗಮಿಸಿದಾಗ ಪುಷ್ಪವೃಷ್ಟಿ ಮಾಡಲಾಯಿತು. ರೈತ ನಾಯಕ ಯಡಿಯೂರಪ್ಪ ಅವರನ್ನು ನೇಗಿಲಿನ ಪ್ರತಿಕೃತಿ ಹಿಡಿದು ರೈತ ಮೋರ್ಚಾ ಪದಾಧಿಕಾರಿಗಳು, ರೈತ ಮುಖಂಡರು ಸ್ವಾಗತಿಸಿದರು. ಮಹಿಳೆಯರು ಪೂರ್ಣಕುಂಭ ಸ್ವಾಗತ ಕೋರಿದರು.

ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ, ಮಾಜಿ ಉಪಮುಖ್ಯಮಂತ್ರಿ ಮತ್ತು ಸಂಸದ ಗೋವಿಂದ ಕಾರಜೋಳ, ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದ ಗೌಡ, ಮಾಜಿ ಸಚಿವರಾದ ಬಿ. ಶ್ರೀರಾಮುಲು, ಬಿ.ಸಿ. ಪಾಟೀಲ್, ಸಂಸದ ಬಿ.ವೈ. ರಾಘವೇಂದ್ರ, ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ, ವಿಧಾನಪರಿಷತ್ ಮುಖ್ಯ ಸಚೇತಕ ಎನ್. ರವಿಕುಮಾರ್, ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂ ಗೌಡ, ಶಾಸಕರಾದ ಎಂ.ಚಂದ್ರಪ್ಪ ಜಿ. ಜನಾರ್ಧನ್ ರೆಡ್ಡಿ, ಎನ್. ಮುನಿರತ್ನ, ಸಿ.ಕೆ. ರಾಮಮೂರ್ತಿ, ದುರ್ಯೋಧನ ಐಹೊಳೆ, ಯುವ ಮೋರ್ಚಾ ರಾಜ್ಯ ಅಧ್ಯಕ್ಷ ಮತ್ತು ಶಾಸಕ ಧೀರಜ್ ಮುನಿರಾಜು, ವಿಧಾನಪರಿಷತ್ ಮಾಜಿ ಸದಸ್ಯ ವೈ.ಎ. ನಾರಾಯಣಸ್ವಾಮಿ, ಒಬಿಸಿ ಮೋರ್ಚಾ ರಾಜ್ಯ ಅಧ್ಯಕ್ಷ ರಘು ಕೌಟಿಲ್ಯ, ಎಸ್‌ಟಿ ಮೋರ್ಚಾ ರಾಜ್ಯ ಅಧ್ಯಕ್ಷ ಬಂಗಾರು ಹನುಮಂತು, ಮಾಜಿ ಶಾಸಕ ಎಂ.ಪಿ. ರೇಣುಕಾಚಾರ್ಯ, ಜಿ.ಎಸ್. ತಿಪ್ಪಾರೆಡ್ಡಿ, ಪಕ್ಷದ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.



ಚಿತ್ರದುರ್ಗದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ಸಾಗಿಬಂತು.

ವಿವಿಧ ಕಲಾತಂಡಗಳು ಮೆರವಣಿಗೆಯನ್ನು ಇನ್ನಷ್ಟು ಆಕರ್ಷಕವನ್ನಾಗಿ ಮಾಡಿದ್ದವು. ನಾಳೆ ನಡೆಯುವ ಬಿಎಸ್‌ವೈ ಅವರ ಅಭಿಮಾನೋತ್ಸವದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಜೀ ಅವರು ಭಾಗವಹಿಸುತ್ತಾರೆ.

ಸುಮಾರು 10 ಲಕ್ಷದಷ್ಟು ಅಭಿಮಾನಿಗಳು ಪಾಲ್ಗೊಳ್ಳುವ ನಿರೀಕ್ಷೆ ಇದ್ದು, ಇದಕ್ಕಾಗಿ ವ್ಯಾಪಕ ಸಿದ್ಧತೆ ಮಾಡಲಾಗಿದೆ ಎಂದು ಕಾರ್ಯಕ್ರಮದ ಸಂಘಟಕರು ತಿಳಿಸಿದ್ದಾರೆ.

## ಇಬ್ಬರು ವಿದ್ಯಾರ್ಥಿನಿಯರು ನೀರುಪಾಲು

ಮಂಗಳೂರು: ನದಿಯಲ್ಲಿ ಸ್ನಾನಕ್ಕೆ ತೆರಳಿದ್ದ ನಾಲ್ವರಲ್ಲಿ ಇಬ್ಬರು ವಿದ್ಯಾರ್ಥಿನಿಯರು ನೀರಲ್ಲಿ ಮುಳುಗಿ ದಾರುಣ ಸಾವನ್ನಪ್ಪಿರುವ ಘಟನೆ ಮಂಗಳೂರಲ್ಲಿ ನಡೆದಿದೆ.

ಕಡಬದ ಕುಟ್ರುಪ್ಪಾಡಿ ಗ್ರಾಮದ ಕೊಲ್ಯದಕಟ್ಟ ಎಂಬಲ್ಲಿ ಗುಂಡ್ಯಹೊಳೆಯಲ್ಲಿ ಘಟನೆ ನಡೆದಿದೆ. ಕುಟ್ರುಪ್ಪಾಡಿ ನಿವಾಸಿಗಳಾದ ಸುನೀತಾ (21), ಅರ್ಪಿತಾ (15) ವಿದ್ಯಾರ್ಥಿನಿಯರು ಮೃತಪಟ್ಟಿದ್ದಾರೆ.

ಒಂದೇ ಕುಟುಂಬದ ಇಬ್ಬರು ಯುವತಿಯರು ನೀರಲ್ಲಿ ಮುಳುಗಿ ದಾರುಣ ಸಾವನ್ನಪ್ಪಿದ್ದಾರೆ. ಸ್ಥಳೀಯರು ಇವರಿಬ್ಬರ ಮೃತದೇಹ ಹೊರ ತೆಗೆದರು. ಕಡಬ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಚೆನ್ನೈ: ತಮಿಳುನಾಡಿನಲ್ಲಿ ಅತಿದೊಡ್ಡ ಪಕ್ಷವಾಗಿ ಹೊರ ಹೊಮ್ಮಿದ್ರೂ ಮ್ಯಾಜಿಕ್ ನಂಬರ್‌ಗಾಗಿ ಹೆಣಗಾಡುತ್ತಿದ್ದ ವಿಜಯ್ ಸರ್ಕಾರ ರಚನೆಯ ಹಾದಿ ಕೊನೆಗೂ ಸುಗಮವಾಗಿದೆ. ನಟ-ರಾಜಕಾರಣಿ ನಾಳೆ ರಾಜ್ಯದ ಮುಂದಿನ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. 108 ಸ್ಥಾನ ಗೆದ್ದ ಟಿವಿಕೆಗೆ ಸಿಪಿಐ, ಸಿಪಿಐಎಂ, ವಿಸಿಕೆ, ಮುಸ್ಲಿಂ ಲೀಗ್ ಬೆಂಬಲ ನೀಡಿದೆ. ಇದರೊಂದಿಗೆ ನಾಲ್ಕು ದಿನಗಳಿಂದ ನಡೆಯುತ್ತಿದ್ದ ಸರ್ಕಾರ ರಚನೆ ಕಸರತ್ತಿಗೆ ಬ್ರೇಕ್ ಬಿದ್ದಿದೆ. 2 ಬಾರಿ ರಾಜ್ಯಪಾಲರನ್ನು ಭೇಟಿಯಾಗಿದ್ದ ವಿಜಯ್‌ಗೆ ರಾಜ್ಯಪಾಲ ಅರ್ಲೇಕರ್ ಬಹುಮತದ ಸಾಕ್ಷಿ ತೋರಿಸಿ ಎಂದು ವಾಪಸ್ ಕಳಿಸಿದ್ದರು. ಇವತ್ತು 3ನೇ ಬಾರಿಗೆ ರಾಜ್ಯಪಾಲರನ್ನು ಭೇಟಿಯಾದ ವಿಜಯ್, ಟಿವಿಕೆಗೆ ಬೆಂಬಲ ನೀಡಿದ ಪಕ್ಷಗಳ ಬೆಂಬಲ ಪತ್ರ ನೀಡಿ ಸರ್ಕಾರ ರಚಿಸುವ ಹಕ್ಕು ಮಂಡಿಸಿದರು. ರಾಜ್ಯಪಾಲರಿಗೆ ವಿಜಯ್ 120 ಶಾಸಕರ ಬೆಂಬಲ ತೋರಿಸಿದ್ದಾರೆ.

## ಕೇರಳಂಗೆ ವೇಣುಗೋಪಾಲ್ ಸಿಎಂ..?

ತಿರುವನಂತಪುರಂ: ಕೇರಳ ವಿಧಾನಸಭಾ ಚುನಾವಣೆಯಲ್ಲಿ ಭರ್ಜರಿ ಜಯಭೇರಿ ಬಾರಿಸಿ ಅಧಿಕಾರಕ್ಕೆ ಬಂದಿರುವ ಯುಡಿಎಫ್ ಮೈತ್ರಿಕೂಟಕ್ಕೆ ಈಗ ಮುಖ್ಯಮಂತ್ರಿ ಆಯ್ಕೆ ದೊಡ್ಡ ಸವಾಲಾಗಿ ಪರಿಣಮಿಸಿದೆ. ನಾಲ್ವರು ಘಟಾನುಘಟಿ ನಾಯಕರ ನಡುವೆ ಪೈಪೋಟಿ ಏರ್ಪಟ್ಟಿದ್ದು, ಅಂತಿಮ ನಿರ್ಧಾರಕ್ಕಾಗಿ ಇಡೀ ಕೇರಳ ಕಾಂಗ್ರೆಸ್ ಈಗ ದೆಹಲಿಯ ಹೈಕಮಾಂಡ್‌ನತ್ತ ಮುಖ ಮಾಡಿದೆ.

ಕೆ.ಸಿ. ವೇಣುಗೋಪಾಲ್: ಎಐಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಹೈಕಮಾಂಡ್‌ನ ಅತ್ಯಂತ ಪರಮಾಪ್ತ

ವಿ.ಡಿ. ಸತೀಶನ್: ನಿರ್ಗಮಿತ ವಿಧಾನಸಭೆಯ ವಿರೋಧ ಪಕ್ಷದ ನಾಯಕರು.

ರಮೇಶ್ ಚೆನ್ನಿತ್ತಲ: ಕೆಪಿಸಿಸಿ ಪ್ರಚಾರ ಸಮಿತಿಯ ಅಧ್ಯಕ್ಷರು ಹಾಗೂ ಹಿರಿಯ ನಾಯಕರು.

ಸನ್ನಿ ಜೋಸೆಫ್: ಪ್ರಭಾವಿ ಶಾಸಕರು.

ಸಿಎಂ ಆಯ್ಕೆ ಪ್ರಕ್ರಿಯೆಯ ಭಾಗವಾಗಿ ನಿನ್ನೆ ಕೇಂದ್ರ ವೀಕ್ಷಕ ಮುಕುಲ್ ವಾಸ್ನಿಕ್ ಅವರು ನೂತನ ಶಾಸಕರ ಅಭಿಪ್ರಾಯ ಸಂಗ್ರಹಿಸಿದ್ದರು. ಆದರೆ ಈ ರಹಸ್ಯ ಪ್ರಕ್ರಿಯೆಯ ಮಾಹಿತಿ ಈಗ ಬಹಿರಂಗವಾಗಿರುವುದು ಭಾರೀ ಚರ್ಚೆಗೆ ಗ್ರಾಸವಾಗಿದೆ. ಶಾಸಕರು ತಮ್ಮ ಅಭಿಪ್ರಾಯ ದಾಖಲಿಸಿದ್ದ ಪಟ್ಟಿಯ ಫೋಟೋವೊಂದು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಅದರಲ್ಲಿ ಹೆಚ್ಚಿನ ಶಾಸಕರು ಹೆಸರಿನ ಮುಂದೆ (ಕೆ.ಸಿ. ವೇಣುಗೋಪಾಲ್) ಎಂದು ಬರೆದು ಬೆಂಬಲ ಸೂಚಿಸಿರುವುದು ಬೆಳಕಿಗೆ ಬಂದಿದೆ.

ರಹಸ್ಯವಾಗಿರಬೇಕಿದ್ದ ಶಾಸಕರ ಅಭಿಪ್ರಾಯದ ಮಾಹಿತಿ ಮತ್ತು ಪಟ್ಟಿಯ ಫೋಟೋ ಸೋರಿಕೆಯಾಗಿರುವುದಕ್ಕೆ ಕೇರಳ ರಾಜ್ಯ ಕಾಂಗ್ರೆಸ್ ತೀವ್ರ ಅಸಮಾಧಾನ ಹೊರಹಾಕಿದೆ. ಇದು ಪಕ್ಷದ ಶಿಸ್ತಿನ ಉಲ್ಲಂಘನೆ ಎಂದು ಕೆಲವು ನಾಯಕರು ದೂರಿದ್ದಾರೆ.

ಕೇರಳದ ಬೆಳವಣಿಗೆಗಳ ಕುರಿತು ವೀಕ್ಷಕರಾದ ಅಜಯ್ ಮಾಕೇನ್ ಮತ್ತು ಮುಕುಲ್ ವಾಸ್ನಿಕ್ ಅವರು ಇಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಸಮಗ್ರ ವರದಿಯನ್ನು ಸಲ್ಲಿಕೆ ಮಾಡಿದ್ದಾರೆ. ಶಾಸಕರ ಅಭಿಪ್ರಾಯ ಮತ್ತು ರಾಜ್ಯದ ರಾಜಕೀಯ ಸ್ಥಿತಿಗತಿಗಳನ್ನು ಆಧರಿಸಿ ಹೈಕಮಾಂಡ್ ಅಂತಿಮ ನಿರ್ಧಾರ ತೆಗೆದುಕೊಳ್ಳಲಿದೆ.

ಹೈಕಮಾಂಡ್‌ನಿಂದ ನೂತನ ಮುಖ್ಯಮಂತ್ರಿಯ ಹೆಸರು ಶನಿವಾರ ಅಧಿಕೃತ ಘೋಷಣೆಯಾಗುವ ಸಾಧ್ಯತೆಯಿದೆ. ಸೋಮವಾರ ತಿರುವನಂತಪುರಂನಲ್ಲಿ ಅದ್ದೂರಿ ಪ್ರಮಾಣ ವಚನ ಸಮಾರಂಭ ನಡೆಯಲಿದೆ.

## ‘ಕಾಂಗ್ರೆಸ್ ಜೊತೆ ಕೂರುವುದಿಲ್ಲ’

ನವದೆಹಲಿ: ತಮಿಳುನಾಡಿನಲ್ಲಿ 55 ವರ್ಷಗಳಿಂದ ಡಿಎಂಕೆ ಜೊತೆ ಮೈತ್ರಿಯಲ್ಲಿದ್ದ ಕಾಂಗ್ರೆಸ್ ಈ ಬಾರಿ ವಿಜಯ್ ಅವರ ಟಿವಿಕೆಗೆ ಬೆಂಬಲ ಘೋಷಿಸಲು ತಮ್ಮ ದಶಕಗಳ ಮೈತ್ರಿಯನ್ನು ಮುರಿದುಕೊಂಡಿದೆ. ಇದು ಎರಡೂ ಪಕ್ಷಗಳ ನಾಯಕರ ಮೇಲೆ ಪರಿಣಾಮ ಬೀರಿದೆ. ಡಿಎಂಕೆ ಸಂಸದೆ ಕನಿಮೋಳಿ ಅವರು ಲೋಕಸಭೆ ಸ್ಪೀಕರ್‌ಗೆ ಪತ್ರ ಬರೆದಿದ್ದು, ನಮ್ಮ ಮೈತ್ರಿ ಮುರಿದುಬಿದ್ದಿರುವುದರಿಂದ ನಾವು (ಡಿಎಂಕೆ ಸಂಸದರು) ಸಂಸತ್ತಿನಲ್ಲಿ ಕಾಂಗ್ರೆಸ್ ಸಂಸದರ ಜೊತೆ ಕುಳಿತುಕೊಳ್ಳುವುದಿಲ್ಲ. ನಮಗೆ ಪ್ರತ್ಯೇಕ ಆಸನದ ವ್ಯವಸ್ಥೆ ಮಾಡಿ ಎಂದು ಕೋರಿದ್ದಾರೆ. ಈ ಪತ್ರವು ಕಾಂಗ್ರೆಸ್ ಜೊತೆಗಿನ ಡಿಎಂಕೆ ಮೈತ್ರಿ ಅಂತ್ಯಗೊಂಡಿರುವುದನ್ನು ಮತ್ತು ಇಂಡಿಯ ಮೈತ್ರಿಕೂಟದಿಂದ ಡಿಎಂಕೆ ಹಿಂದೆ ಸರಿದಿರುವುದನ್ನು ಸೂಚಿಸುತ್ತದೆ.



ತಮಿಳುನಾಡಿನಾದ್ಯಂತ 234 ಕ್ಷೇತ್ರಗಳಿಗೆ ಏಪ್ರಿಲ್ 23ರಂದು ಒಂದೇ ಹಂತದಲ್ಲಿ ವಿಧಾನಸಭಾ ಚುನಾವಣೆ ನಡೆದಿತ್ತು. ಇದಕ್ಕೆ ಮೇ 4ರಂದು ಮತ ಎಣಿಕೆ ನಡೆದಿದ್ದು, ತಮಿಳುನಾಡು ವಿಕ್ಟರಿ ಪಾರ್ಟಿ (ಟಿವಿಕೆ) 108 ಸ್ಥಾನಗಳನ್ನು, ಡಿಎಂಕೆ 59 ಸ್ಥಾನಗಳನ್ನು, ಎಐಎಡಿಎಂಕೆ 47 ಸ್ಥಾನಗಳನ್ನು, ಕಾಂಗ್ರೆಸ್ 5 ಸ್ಥಾನಗಳನ್ನು, ಪಿಎಂಕೆ 4 ಸ್ಥಾನಗಳನ್ನು, ಐಯುಎಂಎಲ್ 2 ಸ್ಥಾನಗಳನ್ನು, ಸಿಪಿಐ 2 ಸ್ಥಾನಗಳನ್ನು, ಸಿಪಿಐ (ಎಂ) 2 ಸ್ಥಾನಗಳನ್ನು ಮತ್ತು ವಿಸಿಕೆ 2 ಸ್ಥಾನಗಳನ್ನು ಗೆದ್ದಿದೆ. ಬಿಜೆಪಿ, ಡಿಎಂಡಿಕೆ ಮತ್ತು ಎಎಂಎಂಕೆ ತಲಾ ಒಂದು ಸ್ಥಾನವನ್ನು ಗೆದ್ದಿವೆ. ತಮಿಳುನಾಡಿನಲ್ಲಿ ಸರ್ಕಾರ ರಚಿಸಲು 118 ಸ್ಥಾನಗಳು ಅಗತ್ಯವಿರುವುದರಿಂದ, ಟಿವಿಕೆ ಇತರೆ ಪಕ್ಷಗಳ ಬೆಂಬಲ ಕೋರಿತ್ತು. ಆಗ ಡಿಎಂಕೆ ಮೈತ್ರಿಕೂಟದಲ್ಲಿದ್ದ ಕಾಂಗ್ರೆಸ್ ತನ್ನ ಮೈತ್ರಿಯನ್ನು ಮುರಿದುಕೊಂಡು ಟಿವಿಕೆಗೆ 5 ಶಾಸಕರ ಬೆಂಬಲ ನೀಡಿತು. ಹೀಗಾಗಿ, ಡಿಎಂಕೆ ಸಂಸದೆ ಕನಿಮೋಳಿ ಕಾಂಗ್ರೆಸ್ ಸಂಸದರ ಜೊತೆ ಸಂಸತ್‌ನಲ್ಲಿ ಕುಳಿತುಕೊಳ್ಳುವುದಿಲ್ಲ ಎಂದಿದ್ದಾರೆ.

ಲೋಕಸಭೆಯಲ್ಲಿ ಆಸನ ವ್ಯವಸ್ಥೆಯಲ್ಲಿ ಬದಲಾವಣೆ ಕೋರಿ ಡಿಎಂಕೆ ಸಂಸದೆ ಕನಿಮೋಳಿ ಲೋಕಸಭಾ ಸ್ಪೀಕರ್‌ಗೆ ಪತ್ರ ಬರೆದಿದ್ದಾರೆ. “ಲೋಕಸಭೆಯಲ್ಲಿ ಡಿಎಂಕೆ ಸಂಸದರಿಗೆ ಆಸನ ವ್ಯವಸ್ಥೆಯಲ್ಲಿ ಸೂಕ್ತ ಬದಲಾವಣೆಗಳನ್ನು ಮಾಡುವಂತೆ ಗೌರವಯುತವಾಗಿ ವಿನಂತಿಸಲು ನಾನು ಈ ಪತ್ರ ಬರೆಯುತ್ತಿದ್ದೇನೆ. ಬದಲಾಗುತ್ತಿರುವ ರಾಜಕೀಯ ಸನ್ನಿವೇಶಗಳು ಮತ್ತು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್‌ನೊಂದಿಗಿನ ನಮ್ಮ ಮೈತ್ರಿಯ ಅಂತ್ಯವನ್ನು ಪರಿಗಣಿಸಿ, ನಮ್ಮ ಸಂಸದರು ಅವರ ಹತ್ತಿರದಲ್ಲಿ ನೀಡಲಾಗಿರುವ ಆಸನದಲ್ಲಿ ಕುಳಿತುಕೊಳ್ಳುವುದು ಸೂಕ್ತವಲ್ಲ. ಹೀಗಾಗಿ, ಬೇರೆ ಆಸನದ ವ್ಯವಸ್ಥೆ ಮಾಡಿ” ಎಂದು ಅವರು ಪತ್ರದಲ್ಲಿ ತಿಳಿಸಿದ್ದಾರೆ.

## ಐಪಿಎಲ್ ಸ್ಥಳಾಂತರಕ್ಕೆ ಕಿಡಿ

ಬೆಂಗಳೂರು: ಸವಾಲಿನ ಸಂದರ್ಭದಲ್ಲೂ ಬೆಂಗಳೂರಿನಲ್ಲಿ ಐಪಿಎಲ್ ಪಂದ್ಯಗಳ ಆಟಕ್ಕೆ ಅವಕಾಶ ನೀಡಿ ಹೆಚ್ಚು ಕಾಳಜಿವಹಿಸಿ ಭದ್ರತೆ ಒದಗಿಸಲಾಗಿತ್ತು. ಅಂತಹ ಸಂದರ್ಭದಲ್ಲೂ ಫೈನಲ್ ಪಂದ್ಯಾವಳಿಯನ್ನು ಗುಜರಾತಿಗೆ ಸ್ಥಳಾಂತರಿಸುವುದು ಸರಿಯಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಶಾಸಕರು ಟಿಕೆಟ್ ಕೇಳಿದ್ದಕ್ಕಾಗಿ ಪಂದ್ಯಾವಳಿಯನ್ನು ಸ್ಥಳಾಂತರಿಸಲಾಗಿದೆ ಎಂದು ಮಾಡುತ್ತಿರುವ ಆರೋಪ ಆಧಾರ ರಹಿತ. ಈ ಬಗ್ಗೆ ಐಪಿಎಲ್ ಅಥವಾ ಕೆಸಿಎ ಸಂಸ್ಥೆಯವರು ನೇರವಾಗಿ ಹೇಳಿಕೆ ನೀಡಲಿ ಎಂದು ಸವಾಲು ಹಾಕಿದರು.

ಬಿಸಿಸಿಐ, ಕೆಸಿಎ ಮತ್ತು ಆರ್‌ಸಿಬಿ ಸಂಸ್ಥೆಗಳ ನಡುವೆ ಆಗಿರುವ ಒಪ್ಪಂದಗಳ ಬಗ್ಗೆ ತಮಗೆ ಮಾಹಿತಿ ಇಲ್ಲ. ಆದರೆ ಐಪಿಎಲ್ ಪಂದ್ಯಾವಳಿಯನ್ನು ಲಾಭದ ಆಸೆಯಿಂದ ನೋಡಲಾಗುತ್ತಿದೆ. ಬೆಂಗಳೂರಿನ ಕ್ರಿಡಾಂಗಣದಲ್ಲಿ 33 ಸಾವಿರ ಆಸನಗಳಲ್ಲಿ ಒಂದಿಷ್ಟು ಉಚಿತ ಟಿಕೆಟ್‌ಗಳು ಹೋಗುತ್ತಿವೆ ಎಂಬುದನ್ನು ಹೊರತು ಪಡಿಸಿದರೆ, ಭದ್ರತೆ ಅಥವಾ ವ್ಯವಸ್ಥೆಗಳಲ್ಲಾಗಲೀ ಯಾವುದೇ ಲೋಪವಿಲ್ಲ. ನಮ ಪೊಲೀಸ್ ಇಲಾಖೆ ಎಲ್ಲಾ ರೀತಿಯ ಸಹಕಾರ ನೀಡಿದೆ. ಈ ಹಿಂದಿನ ವರ್ಷದಂತೆ ದುರಂತಗಳು ನಡೆಯಬಾರದು ಎಂದು ಹೆಚ್ಚಿನ ಕಾಳಜಿ ವಹಿಸಲಾಗಿತ್ತು ಎಂದರು. ಪಿಎಲ್ ಪಂದ್ಯಾವಳಿಗಳು ಬೆಂಗಳೂರಿನಿಂದ ಸ್ಥಳಾಂತರವಾಗಬಾರದು ಎಂಬ ಕಾರಣಕ್ಕಾಗಿ ಸಂಕಷ್ಟದ ಸಂದರ್ಭದಲ್ಲೂ ಅನುಮತಿ ನೀಡಲಾಗಿತ್ತು. ನ್ಯಾಯಮೂರ್ತಿ ಮೈಕಲ್ ಖುನ್ನಾ ಅವರ ವರದಿಯ ಪ್ರಕಾರ ಹಲವಾರು ಕೆಲಸಗಳನ್ನು ಕೈಗೊಳ್ಳಬೇಕಿತ್ತು. ಅವುಗಳಲ್ಲಿ ದೀರ್ಘಾವಧಿ, ಅಲ್ಪಾವಧಿ ಎಂದು ವಿಂಗಡಿಸಲಾಗಿತ್ತು. ಅಲ್ಪಾವಧಿಯ ಕೆಲಸಗಳನ್ನು ತ್ವರಿತವಾಗಿ ಕೈಗೊಂಡು ಐಪಿಎಲ್ ಪಂದ್ಯಾವಳಿ ನಡೆಸಲು ಅನುವು ಮಾಡಿಕೊಡಲಾಗಿತ್ತು.

ಈಗ ಲಾಭದ ಆಸೆಯಿಂದ ಅಹಮದಾಬಾದ್‌ನ ಕ್ರಿಡಾಂಗಣದಲ್ಲಿ 1 ಲಕ್ಷ ಆಸನಗಳಿವೆ. ಹೆಚ್ಚಿನ ಲಾಭವಾಗುತ್ತದೆ ಎಂಬ ಕಾರಣಕ್ಕಾಗಿ ಪಂದ್ಯಾವಳಿಯನ್ನು ಸ್ಥಳಾಂತರ ಮಾಡಲಾಗುತ್ತಿದೆ. ಇದಕ್ಕೂ, ಸರ್ಕಾರಕ್ಕೂ ಸಂಬಂಧವಿಲ್ಲ ಎಂದರು.

ರಾಜ್ಯದಲ್ಲಿ ವಿಧಾನಸಭೆ, ವಿಧಾನ ಪರಿಷತ್ ಎರಡೂ ಸೇರಿದರೆ, 300 ಶಾಸಕರಾಗುತ್ತಾರೆ. ಒಬ್ಬರಿಗೆ ಎರಡು ಟಿಕೆಟ್‌ಗಳನ್ನು ನೀಡಲಾಗುತ್ತಿದೆ. ಒಟ್ಟು 600 ಟಿಕೆಟ್ ನೀಡುವ ಕಾರಣಕ್ಕಾಗಿ ಸ್ಥಳಾಂತರ ಮಾಡುತ್ತಿದ್ದೇವೆ ಎಂದು ಅವರು ಹೇಳಲಿ ಎಂದು ಖಾರವಾಗಿ ಸವಾಲು ಹಾಕಿದರು.ಯಾರಿಗೆಲ್ಲಾ ಟಿಕೆಟ್ ಕೊಟ್ಟಿದ್ದಾರೆ. ಆರ್‌ಸಿಬಿಯವರು ಎಷ್ಟು ಜನರಿಗೆ ಟಿಕೆಟ್ ಕೊಟ್ಟಿದ್ದಾರೆ.

## ಜೂನ್‌ನಲ್ಲಿ ಜಿಬಿಎಗೆ ಚುನಾವಣೆ ಫಿಕ್ಸ್: ಚುನಾವಣಾ ಆಯೋಗ

ಬೆಂಗಳೂರು: ಸುಪ್ರೀಂಕೋರ್ಟ್ ಸೂಚನೆಯಂತೆ ಜೂ. 20 ರಿಂದ 24ರೊಳಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಐದು ನಗರ ಪಾಲಿಕೆಗಳಿಗೆ ಚುನಾವಣೆ ನಡೆಸಲಾಗುವುದು ಎಂದು ರಾಜ್ಯ ಮುಖ್ಯ ಚುನಾವಣಾ ಆಯುಕ್ತರು ಶುಕ್ರವಾರ ಹೇಳಿದ್ದಾರೆ.

ಪಂಚ ಪಾಲಿಕೆಗಳ ಚುನಾವಣೆ ಸಂಬಂಧ ಇಂದು ಆಯೋಗದಲ್ಲಿ ಕರೆಯಲಾಗಿದ್ದ ಸಭೆಯ ನಂತರ ರಾಜ್ಯ ಮುಖ್ಯ ಚುನಾವಣಾ ಆಯುಕ್ತ ಸಂಗ್ರೇಶಿ ಅವರು ಈ ಕುರಿತು ಮಾಹಿತಿ ನೀಡಿದರು. ಜೂನ್ 14 ರಿಂದ 24 ರ ಒಳಗೆ ಚುನಾವಣೆ ದಿನಾಂಕ ಘೋಷಣೆ ಮಾಡುವಂತೆ ಸೂಚಿಸಿದ್ದೇನೆಂದು ಹೇಳಿದರು,

ಕಾನೂನಿನ ಪ್ರಕಾರ ರಾಜ್ಯ ಚುನಾವಣಾ ಆಯೋಗವು ಜಿಬಿಎ ಜೊತೆಗೆ ಸಮಾಲೋಚನೆ ನಡೆಸಿ ದಿನಾಂಕ ನಿಗದಿಪಡಿಸಬೇಕಿತ್ತು. ಅದಕ್ಕಾಗಿ ಸಭೆ ನಡೆಸಲಾಗಿದೆ. ಚುನಾವಣಾ ಪ್ರಕ್ರಿಯೆಗೆ ಅಗತ್ಯವಾದ ಎಲ್ಲ ಸಿದ್ಧತೆಗಳು ಪೂರ್ಣಗೊಂಡಿದ್ದು, ದಿನಾಂಕ ಘೋಷಣೆ ಮಾತ್ರ ಬಾಕಿಯಾಗಿದೆ ಎಂದು ತಿಳಿಸಿದರು.

ಜಿಬಿಎ ವತಿಯಿಂದ ಸ್ವಲ್ಪ ಕಾಲ ಚುನಾವಣೆ ಮುಂದೂಡುವಂತೆ ಮನವಿ ಮಾಡಲಾಗಿದ್ದರೂ, ಜೂನ್ 30ರೊಳಗೆ ಚುನಾವಣೆ ಪೂರ್ಣಗೊಳಿಸಬೇಕೆಂಬ ಸುಪ್ರೀಂಕೋರ್ಟ್ ಸ್ಪಷ್ಟ ಆದೇಶ ಇರುವುದರಿಂದ ಮುಂದೂಡುವ ಅಧಿಕಾರ ನನ್ನಗಿಲ್ಲ ಎಂದು ಚುನಾವಣಾ ಆಯುಕ್ತರು ಸ್ಪಷ್ಟಪಡಿಸಿದರು.

ಜೂ.24 ರೊಳಗೆ ಸರ್ಕಾರಿ ಪ್ರಾಯೋಜಿತ ಯಾವುದೇ ಕಾರ್ಯಕ್ರಮಗಳಿದ್ದರೆ ಶೀಘ್ರವೇ ಮುಗಿಸಲು ಸೂಚನೆ ನೀಡಿದ್ದೇನೆ. ಚುನಾವಣೆ ದಿನಾಂಕ ಶೀಘ್ರದಲ್ಲೇ ಜಾರಿ ಆಗುವ ಬಗ್ಗೆ ಜಿಬಿಎ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆಂದು ಹೇಳಿದರು.




ಜೂನ್ 20 ರಿಂದ ಜೂನ್ 24 ರೊಳಗೆ ಚುನಾವಣೆ ನಡೆಸಬೇಕಾಗಿದೆ ಆದರೆ ಯಾವ ದಿನ ಚುನಾವಣೆ ಮಾಡಬೇಕು ಅನ್ನುವುದನ್ನು ಒಂದು ವಾರದಲ್ಲಿ ನಿಗದಿ ಪಡಿಸುತ್ತೇವೆ. ಒಟ್ಟಿನಲ್ಲಿ ಸುಪ್ರೀಂ ಕೋರ್ಟ್ ನೀಡಿರುವ ಗಡುವಿನೊಳಗೆ ಚುನಾವಣೆ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದರು.

ಜಿಬಿಎ ನೂರು ಸಮಸ್ಯೆ ಹೇಳಲಿ ಅದಕ್ಕೆ ನಾವು ಕೇರ್ ಮಾಡಲ್ಲ. ಜೂ.20 ರಿಂದ 24ರ ನಡುವಿನ ಅವಧಿಯಲ್ಲಿ ಚುನಾವಣೆ ನಡೆಸುವುದು ಕಡ್ಡಾಯ. ಒಂದು ವಾರ ಕಾಯುತ್ತೇನೆ, ಅವರು ಹೇಳಿದರೂ ಬಿಟ್ಟರೂ ನಾನು ಈ ಅವಧಿಯಲ್ಲಿ ಚುನಾವಣೆ ನಡೆಸಿ ತೀರುತ್ತೇನೆ ಎಂದು ಹೇಳಿದರು.

ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅವರು ಮಾತನಾಡಿ, ಚುನಾವಣೆಗೆ ಆರ್‌ಓ, ಎಆರ್‌ಓ ಹಾಗೂ ಬಿಎಲ್‌ಓ ಗಳ ನೇಮಕಾತಿಗೆ ಕ್ರಮ ಕೈಗೊಳ್ಳುವಂತೆ ಚುನಾವಣಾ ಆಯುಕ್ತರು ಸೂಚನೆ ನೀಡಿದ್ದಾರೆ ಅದನ್ನು ಪಾಲಿಸಲಾಗುವುದು ಎಂದು ತಿಳಿಸಿದರು.

ಈಗಾಗಲೇ ವಾರ್ಡ್ ವಿಂಗಡಣೆ, ಮೀಸಲಾತಿ ಹಾಗೂ ಅಂತಿಮ ಮತದಾರರ ಪಟ್ಟಿ ಸಿದ್ಧಗೊಂಡಿದ್ದು, ಚುನಾವಣೆಗೆ ಬೇಕಾದ ಪೂರ್ವ ಸಿದ್ಧತೆಗಳನ್ನು ಪೂರ್ಣಗೊಳಿಸಲಾಗಿದೆ. ಇದರ ಜೊತೆಗೆ ವಾರ್ಡುವಾರು ಮತದಾನ ಕೇಂದ್ರದ ಪಟ್ಟಿಯನ್ನು ಆಯೋಗದ ಅನುಮೋದನೆ ಪಡೆದು ಪ್ರಚುರಪಡಿಸುವುದು, ಚುನಾವಣಾಧಿಕಾರಿ ಮತ್ತು ಸಹಾಯಕ ಚುನಾವಣಾಧಿಕಾರಿಗಳ ನೇಮಕಾತಿ ಅಧಿಸೂಚನೆ ಹೊರಡಿಸುವುದು, ಮತಗಟ್ಟೆ ಸಿಬ್ಬಂದಿ ನೇಮಕ ಮತ್ತು ತರಬೇತಿ, ಮತಪೆಟ್ಟಿಗೆಗಳ ಎತ್ತುವಳಿ, ಸಾಗಾಣಿಕೆ, ಸಂಗ್ರಹಣೆ ಸಂಬಂಧ ನೋಡಲ್ ಅಧಿಕಾರಿಗಳನ್ನು ನೇಮಕ ಮಾಡುವುದು.

ಮಸ್ಟರಿಂಗ್, ಡಿ–ಮಸ್ಟರಿಂಗ್ ಮತ್ತು ಮತ ಎಣಿಕೆ ಕೇಂದ್ರಗಳನ್ನು ಸ್ಥಾಪಿಸುವುದು, ಭದ್ರತಾ ಕೊಠಡಿ ವ್ಯವಸ್ಥೆ, ಸಾರ್ವಜನಿಕ ಸ್ಥಳಗಳಲ್ಲಿ ಪೋಸ್ಟರ್ ಮತ್ತು ಹೋರ್ಡಿಂಗ್ ಹಾಕುವುದನ್ನು ನಿಷೇಧಿಸುವುದು ಹಾಗೂ ಚುನಾವಣಾ ಪ್ರಚಾರಕ್ಕಾಗಿ ಸಭೆ ನಡೆಸಲು ರಾಜಕೀಯ ಪಕ್ಷಗಳಿಗೆ ಅನುಮತಿ ನೀಡುವ ಕುರಿತಂತೆ ಇಂದಿನ ಸಭೆಯಲ್ಲಿ ಚರ್ಚೆ ನಡೆಸಲಾಯಿತು ಎಂದು ಹೇಳಿದರು.

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## "ಯುಹೆಚ್‌ಎಸ್ ಸಂತೆ"

ಬೆಂಗಳೂರು

ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ವತಿಯಿಂದ ಪ್ರತಿ ತಿಂಗಳ ಎರಡನೇ ಶನಿವಾರ ಆಯೋಜಿಸಲಾಗುವ "ಯುಹೆಚ್‌ಎಸ್ ಸಂತೆ" ಕಾರ್ಯಕ್ರಮದ ಎರಡನೇ ಆವೃತ್ತಿ ಮೇ 9ರಂದು ನಡೆಯಲಿದೆ.

ವಿದ್ಯಾರಣ್ಯಪುರದ ಯಲಹಂಕ ರಸ್ತೆಯ ದೊಡ್ಡಬೆಟ್ಟಹಳ್ಳಿ ಬಸ್ ನಿಲ್ದಾಣ ಸಮೀಪದ ಜಿಕೆವಿಕೆ ಪ್ರಾದೇಶಿಕ ತೋಟಗಾರಿಕೆ ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರ ಆವರಣದಲ್ಲಿ ಬೆಳಿಗ್ಗೆ 7 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಈ ಸಂತೆ ನಡೆಯಲಿದೆ.

ಈ ಸಂತೆಯಲ್ಲಿ ಸುತ್ತಮುತ್ತಲಿನ ಜಿಲ್ಲೆಗಳ ರೈತರು ಬೆಳೆದ ವಿವಿಧ ತರಕಾರಿಗಳು, ಹಣ್ಣುಗಳು, ಹೂವುಗಳು, ಸಾಂಬಾರು ಪದಾರ್ಥಗಳು ಹಾಗೂ ಮೌಲ್ಯವರ್ಧಿತ ಉತ್ಪನ್ನಗಳನ್ನು ರೈತರಿಂದ ನೇರವಾಗಿ ಖರೀದಿಸಲು ಅವಕಾಶ ಕಲ್ಪಿಸಲಾಗಿದೆ. ಇದರಿಂದ ರೈತರಿಗೆ ನೇರ ಮಾರುಕಟ್ಟೆ ಸೌಲಭ್ಯ ದೊರಕುವುದರ ಜೊತೆಗೆ ನಗರ ನಿವಾಸಿಗಳಿಗೆ ತಾಜಾ ಉತ್ಪನ್ನಗಳು ಲಭ್ಯವಾಗಲಿವೆ.

ಅಲ್ಲದೆ, ವಿವಿಧ ಬಗೆಯ ಹಣ್ಣಿನ ಗಿಡಗಳು ಹಾಗೂ ಅಲಂಕಾರಿಕ ಸಸ್ಯಗಳ ಮಾರಾಟವೂ ನಡೆಯಲಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಸದುಪಯೋಗ ಪಡೆಯುವಂತೆ ಡಾ. ಎಸ್.ಎಲ್. ಜಗದೀಶ್ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

## ಸಾರ್ವಜನಿಕರ ಕುಂದು–ಕೊರತೆ ಫೋನ್‌ಇನ್ ಕಾರ್ಯಕ್ರಮ

ಬೆಂಗಳೂರು

ಬೆಂಗಳೂರು ಜಲಮಂಡಳಿ ವತಿಯಿಂದ ಸಾರ್ವಜನಿಕರ ಕುಂದು–ಕೊರತೆಗಳಿಗೆ ಸ್ಪಂದಿಸುವ ಉದ್ದೇಶದಿಂದ ಮೇ 8ರಂದು ನೇರ ಫೋನ್–ಇನ್ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಜಲಮಂಡಳಿ ಅಧ್ಯಕ್ಷ ಡಾ. ವಿ. ರಾಮ್ ಪ್ರಸಾತ್ ಮನೋಹರ್ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಈ ಕಾರ್ಯಕ್ರಮವು ಶುಕ್ರವಾರ ಬೆಳಿಗ್ಗೆ 9:30ರಿಂದ 10:30ರವರೆಗೆ ನಡೆಯಲಿದೆ.

ನಗರದ ವಿವಿಧ ವಲಯಗಳು ಹಾಗೂ ಪ್ರದೇಶಗಳಲ್ಲಿ ಉಂಟಾಗಿರುವ ಕುಡಿಯುವ ನೀರಿನ ಸಮಸ್ಯೆ, ಒಳಚರಂಡಿ ಕೊಳವೆ ಅಥವಾ ಇಳಿ ಗುಂಡಿಯಿಂದ ತ್ಯಾಜ್ಯ ನೀರು ಹೊರಬರುತ್ತಿರುವ ಬಗ್ಗೆ, ಜಲಮಾಪಕ ಹಾಗೂ ನೀರಿನ ಬಿಲ್ಲು ಸಂಬಂಧಿತ ಸಮಸ್ಯೆಗಳ ಕುರಿತು ಸಾರ್ವಜನಿಕರು ನೇರವಾಗಿ ದೂರವಾಣಿ ಮೂಲಕ ಮಾತನಾಡಿ ತಮ್ಮ ಅಹವಾಲುಗಳನ್ನು ಸಲ್ಲಿಸಬಹುದು.

ಸಾರ್ವಜನಿಕರು 080–22945119 ಮತ್ತು 080–22229639 ಸಂಖ್ಯೆಗಳ ಮೂಲಕ ಸಂಪರ್ಕಿಸಬಹುದಾಗಿದೆ. ನೀರಿನ ಸಂಪರ್ಕ ಹೊಂದಿರುವ ಗ್ರಾಹಕರು ತಮ್ಮ ಆರ್.ಆರ್. ಸಂಖ್ಯೆಯನ್ನು ತಿಳಿಸಿ ದೂರು ದಾಖಲಿಸಲು ಜಲಮಂಡಳಿ ಕೋರಿದೆ.

ಈ ನೇರ ಫೋನ್–ಇನ್ ಕಾರ್ಯಕ್ರಮದ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳುವಂತೆ ಪ್ರಕಟಣೆಯಲ್ಲಿ ಮನವಿ ಮಾಡಲಾಗಿದೆ.

## ಮುಂಗಾರು ಮಳೆ ಮುನ್ನೆಚ್ಚರಿಕೆ ಕ್ರಮವಾಗಿ ತುರ್ತಾಗಿ ಹೂಳೆತ್ತಲು ಕಟ್ಟುನಿಟ್ಟಿನ ಆದೇಶ



ಬೆಂಗಳೂರು

ದಕ್ಷಿಣ ವಲಯದ ಆಯುಕ್ತ ಕೆ.ಎನ್.ರಮೇಶ್ ಅವರು ಮುಂಗಾರು ಮಳೆಯಿಂದ ಪಾಲಿಕೆ ವ್ಯಾಪ್ತಿಯಲ್ಲಿ ಸಂಭವಿಸಬಹುದಾದ ವಿಪತ್ತುಗಳನ್ನು ತಡೆಯುವ ನಿಟ್ಟಿನಲ್ಲಿ ಸಾರಕ್ಕಿ ಜೆ.ಪಿ. ನಗರದ ಸಿಂಧೂರ ಕಲ್ಯಾಣ ಮಂಟಪದ ಸಮೀಪದಲ್ಲಿ ಹೊರವರ್ತುಲ ರಸ್ತೆಯ ರಾಜಕಾಲುವೆ ಪ್ರದೇಶಗಳಲ್ಲಿ ನಡೆಯುತ್ತಿರುವ ಹೂಳೆತ್ತುವ ಕಾಮಗಾರಿಗಳನ್ನು ಖುದ್ದಾಗಿ ಪರಿಶೀಲಿಸಿದರು.

ಪರಿಶೀಲನೆಯ ವೇಳೆ ಆಯುಕ್ತರು ಇಂಜಿನಿಯರ್‌ಗಳಿಗೆ ಚರಂಡಿಗಳಲ್ಲಿ ಹಾಗೂ ಮಳೆ ನೀರು ಕಾಲುವೆಗಳಲ್ಲಿ ಸಂಗ್ರಹವಾದ ಹೂಳನ್ನು ತೆರವುಗೊಳಿಸುವುದರೊಂದಿಗೆ ವಿಳಂಬವಿಲ್ಲದೆ ತಕ್ಷಣವೇ ಸ್ಥಳಾಂತರಿಸಬೇಕು ಎಂದು ತಿಳಿಸಿದರು. ಅಲ್ಲದೆ, ರಸ್ತೆ ಬದಿಯ ಚರಂಡಿಗಳ ಮೇಲಿರುವ ಸ್ಲ್ಯಾಬ್‌ಗಳನ್ನು ತೆಗೆದು, ಒಳಗೆ ಶೇಖರವಾಗಿರುವ ಕಸ ಮತ್ತು ಕಳೆ ಗಿಡಗಳನ್ನು ಸಂಪೂರ್ಣವಾಗಿ ಸ್ವಚ್ಛಗೊಳಿಸುವಂತೆ ನಿರ್ದೇಶಿಸಿದರು.

ರಾಜಕಾಲುವೆಗಳ ಸೇತುವೆ ಜಂಕ್ಷನ್‌ಗಳಲ್ಲಿ ಪ್ಲಾಸ್ಟಿಕ್ ತ್ಯಾಜ್ಯವು ನೀರಿನ ಹರಿವಿಗೆ ಅಡ್ಡಿಪಡಿಸದಂತೆ ಎಚ್ಚರಿಕೆ ವಹಿಸಲು ಆಯುಕ್ತರು ಸೂಚಿಸಿದರು. ಇಂತಹ ಸೂಕ್ಷ್ಮ ಪ್ರದೇಶಗಳಲ್ಲಿ ನಿರಂತರವಾಗಿ ಪ್ಲಾಸ್ಟಿಕ್ ತ್ಯಾಜ್ಯವನ್ನು ತೆಗೆದುಹಾಕುವ ಮೂಲಕ ಸರಾಗ ನೀರು ಹರಿವಿಗೆ ಕ್ರಮ ಕೈಗೊಳ್ಳಬೇಕು ಎಂದು ಅವರು ಎಂಜಿನಿಯರ್‌ಗಳಿಗೆ ತಿಳಿಸಿದರು. ಕಾಲುವೆ ಒತ್ತುವರಿ ತೆರವು ಕುರಿತು ಸಮಗ್ರವಾಗಿ ಪರಾಮರ್ಶಿಸಿ, ಮುಂಬರುವ ಮಳೆಗಾಲದಲ್ಲಿ ಎದುರಾಗಬಹುದಾದ ಪ್ರವಾಹ ಪರಿಸ್ಥಿತಿಯನ್ನು ಎದುರಿಸಲು ಕೈಗೊಂಡಿರುವ ಮುಂಜಾಗ್ರತಾ ಕ್ರಮಗಳನ್ನು ತುರ್ತಾಗಿ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಅಪರ ಆಯುಕ್ತ ನವೀನ್ ಕುಮಾರ್ ರಾಜು ರವರು ನಿರ್ದೇಶಿಸಿದರು.

# ಆರೋಗ್ಯ ತುರ್ತು ಕಾರ್ಯಾಚರಣೆ ಕೇಂದ್ರ ಲೋಕಾರ್ಪಣೆ

ಬೆಂಗಳೂರು

ಕರ್ನಾಟಕ ರಾಜ್ಯದಲ್ಲಿ ಸಾರ್ವಜನಿಕ ಆರೋಗ್ಯ ತುರ್ತು ಪರಿಸ್ಥಿತಿಗಳು ಮತ್ತು ವಿಪತ್ತುಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಅತ್ಯಾಧುನಿಕ 'ಆರೋಗ್ಯ ತುರ್ತು ಕಾರ್ಯಾಚರಣೆ ಕೇಂದ್ರ' ಅನ್ನು ಲೋಕಾರ್ಪಣೆ ಮಾಡಲಾಗಿದೆ.

ಆರೋಗ್ಯ ಸೌಧದಲ್ಲಿ ಸ್ಥಾಪನೆಯಾಗಿರುವ ಈ ಕೇಂದ್ರವು ರಾಜ್ಯದ ಸಾರ್ವಜನಿಕ ಆರೋಗ್ಯ ಮೂಲಸೌಕರ್ಯ ಬಲವರ್ಧನೆಯಲ್ಲಿ ಮಹತ್ವದ ಮೈಲಿಗಲ್ಲಾಗಿ ಪರಿಗಣಿಸಲಾಗಿದೆ.

ಸಾಂಕ್ರಾಮಿಕ ರೋಗಗಳು, ಪ್ರಕೃತಿ ವಿಕೋಪಗಳು ಹಾಗೂ ಇತರೆ ಆರೋಗ್ಯ ತುರ್ತು ಪರಿಸ್ಥಿತಿಗಳಿಗೆ ತ್ವರಿತ ಹಾಗೂ ಸಮನ್ವಯಿತ ಪ್ರತಿಕ್ರಿಯೆ ನೀಡುವ ಉದ್ದೇಶದಿಂದ ಈ ಕೇಂದ್ರವನ್ನು ಸ್ಥಾಪಿಸಲಾಗಿದೆ. ಕೋವಿಡ್–19 ಮಹಾಮಾರಿಯ ಸಂದರ್ಭದಲ್ಲಿ ಎದುರಾದ ಸವಾಲುಗಳು ಆರೋಗ್ಯ ವ್ಯವಸ್ಥೆಯಲ್ಲಿ ನೈಜ–



ಸಮಯದ ಮೇಲ್ವಿಚಾರಣೆ ಮತ್ತು ತ್ವರಿತ ನಿರ್ಧಾರ ಕೈಗೊಳ್ಳುವ ವ್ಯವಸ್ಥೆಯ ಅಗತ್ಯವನ್ನು ಸ್ಪಷ್ಟಪಡಿಸಿದ್ದವು. ಈ ಹಿನ್ನೆಲೆ ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ಆಯುಷ್ಮಾನ್ ಭಾರತ ಆರೋಗ್ಯ ಮೂಲಸೌಕರ್ಯ ಮಿಷನ್ ಅಡಿಯಲ್ಲಿ ಸ್ಥಾಪಿಸಲಾಗಿದೆ.

ಇದುವರೆಗೆ ತುರ್ತು ಪರಿಸ್ಥಿತಿಗಳ ನಿರ್ವಹಣೆ ವಿಭಜಿತ ಹಾಗೂ ಸಮನ್ವಯದ ಕೊರತೆಯೊಂದಿಗೆ ನಡೆಯುತ್ತಿತ್ತು. ಆದರೆ ಹೊಸ ಕೇಂದ್ರವು 24/7 ನಿರಂತರ ಮೇಲ್ವಿಚಾರಣೆ, ನೈಜ–ಸಮಯದ ಮಾಹಿತಿ ನಿರ್ವಹಣೆ ಮತ್ತು ತ್ವರಿತ ಸಂಪನ್ಮೂಲ ನಿಯೋಜನೆಗೆ ನೆರವಾಗಲಿದೆ. ಇದು ಪ್ರತಿಕ್ರಿಯಾತ್ಮಕ ವ್ಯವಸ್ಥೆಯಿಂದ ಪೂರ್ವಸಿದ್ಧತಾ ಆಧಾರಿತ ವ್ಯವಸ್ಥೆಯತ್ತ ಸಾಗುತ್ತಿರುವ ಮಹತ್ವದ ಪರಿವರ್ತನೆಯಾಗಿದೆ.

ಈ ಅತ್ಯಾಧುನಿಕ ಕೇಂದ್ರದಲ್ಲಿ ಹೈ–ಟೆಕ್ ವೀಡಿಯೋ ವಾಲ್, ವೀಡಿಯೋ ಕಾನ್ಫರೆನ್ಸ್ ವ್ಯವಸ್ಥೆ, ಡೇಟಾ ಸರ್ವರ್, ಸುಧಾರಿತ ನೆಟ್‌ವರ್ಕ್ ವ್ಯವಸ್ಥೆ ಹಾಗೂ ನೈಜ–ಸಮಯದ ಡ್ಯಾಶ್‌ಬೋರ್ಡ್‌ಗಳಂತಹ ತಾಂತ್ರಿಕ ಸೌಲಭ್ಯಗಳನ್ನು ಅಳವಡಿಸಲಾಗಿದೆ. ತುರ್ತು ಕರೆ ನಿರ್ವಹಣೆ ಮತ್ತು ನಿರಂತರ ಮೇಲ್ವಿಚಾರಣೆಗೆ ಅಗತ್ಯವಿರುವ ಎಲ್ಲಾ ವ್ಯವಸ್ಥೆಗಳು ಇಲ್ಲಿ ಲಭ್ಯವಿವೆ.

ಆರೋಗ್ಯ ಇಲಾಖೆಯೊಂದಿಗೆ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ, ಪೊಲೀಸ್ ಇಲಾಖೆ, ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಹಾಗೂ ಜಿಲ್ಲಾಡಳಿತಗಳು ಸಮನ್ವಯ ಸಾಧಿಸಲಿವೆ. ವಾಚ್ ಮೋಡ್, ಅಲರ್ಟ್ ಮೋಡ್, ಪ್ರತಿಕ್ರಿಯೆ ಮೋಡ್ ಮತ್ತು ಪುನಶ್ಚೇತನ ಮೋಡ್ ಎಂಬ ನಾಲ್ಕು ಹಂತಗಳಲ್ಲಿ ಈ ಕೇಂದ್ರ ಕಾರ್ಯನಿರ್ವಹಿಸಲಿದೆ.

ಮುಂದಿನ ದಿನಗಳಲ್ಲಿ ಈ ರಾಜ್ಯಮಟ್ಟದ ನಿಯಂತ್ರಣ ಕೇಂದ್ರವನ್ನು ಜಿಲ್ಲಾ ಮಟ್ಟಕ್ಕೂ ವಿಸ್ತರಿಸುವ ಯೋಜನೆ ರೂಪಿಸಲಾಗಿದ್ದು, ಪ್ರತೀ ಜಿಲ್ಲೆಯಲ್ಲಿ ನೋಡಲ್ ಅಧಿಕಾರಿಗಳ ಮೂಲಕ ನೇರ ಸಂಪರ್ಕ ವ್ಯವಸ್ಥೆ ಕಲ್ಪಿಸಲಾಗುತ್ತದೆ.

ಒಟ್ಟಾರೆ, ತಂತ್ರಜ್ಞಾನ, ಸಮನ್ವಯ ಮತ್ತು ತ್ವರಿತ ನಿರ್ಧಾರ ಕೈಗೊಳ್ಳುವ ಸಾಮರ್ಥ್ಯದ ಮೂಲಕ ಈ ಆರೋಗ್ಯ ತುರ್ತು ಕಾರ್ಯಾಚರಣೆ ಕೇಂದ್ರವು ಭವಿಷ್ಯದ ಆರೋಗ್ಯ ಸವಾಲುಗಳನ್ನು ಎದುರಿಸಲು ಕರ್ನಾಟಕವನ್ನು ಇನ್ನಷ್ಟು ಸಜ್ಜುಗೊಳಿಸಿದ್ದು, ರಾಷ್ಟ್ರ ಮಟ್ಟದಲ್ಲಿ ಮಾದರಿಯ ಯೋಜನೆಯಾಗಿ ಹೊರಹೊಮ್ಮಿದೆ.

## ಕಾಂಗ್ರೆಸ್ ಸ್ಥಿತಿ ಭಿಕ್ಷುಕರ ರೀತಿ ಆಗಿದೆ: ಛಲವಾದಿ ನಾರಾಯಣಸ್ವಾಮಿ ವ್ಯಂಗ್ಯ

ಬೆಂಗಳೂರು

ತಮಿಳುನಾಡಿನಲ್ಲಿ ಡಿಎಂಕೆ ಜೊತೆ ಇದ್ದ ಕಾಂಗ್ರೆಸ್, ನಟ ವಿಜಯ್ ನೇತೃತ್ವದ ಟಿವಿಕೆ ಪಕ್ಷ ಹೆಚ್ಚಿನ ಸ್ಥಾನ ಪಡೆದ ಕೂಡಲೇ ರಾತ್ರೋರಾತ್ರಿ ಆ ಪಕ್ಷದ ಮುಂದೆ ಹೋಗಿ ಸಚಿವ ಸ್ಥಾನಕ್ಕೆ ಭಿಕ್ಷೆ ಬೇಡುತ್ತಿದೆ. ಡಿಎಂಕೆ ಸಖ್ಯ ಬಿಟ್ಟು ಕಾಂಗ್ರೆಸ್ ಸ್ಥಿತಿ ಭಿಕ್ಷುಕರ ರೀತಿ ಆಗಿದೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ಅವರು ವ್ಯಂಗ್ಯವಾಡಿದ್ದಾರೆ.

ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಷ್ಟ್ರೀಯ ಪಕ್ಷ ಕಾಂಗ್ರೆಸ್‌ಗೆ ಇಂತಹ ಹೀನಾಯ ಸ್ಥಿತಿ ಬಂದಿದೆ. ಪಂಚರಾಜ್ಯ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಮುಸ್ಲಿಮರು ಸಾಕಷ್ಟು ಬೆಂಬಲ ನೀಡಿದ್ದಾರೆ. ಕಾಂಗ್ರೆಸ್‌ಗೆ ಮುಸ್ಲಿಮರು ಇಲ್ಲದಿದ್ದರೆ ತಿಪ್ಪೆಗುಂಡಿಗೆ ಹಾಕುವ ಕಸಕ್ಕೆ ಸಮ ಎಂದರು.

ಪಂಚ ರಾಜ್ಯಗಳ ಚುನಾವಣೆಯಲ್ಲಿ ಬಿಜೆಪಿಗೆ ಅಭೂತಪೂರ್ವವಾದ ಜಯ ಸಿಕ್ಕಿದೆ. ಪಶ್ಚಿಮ ಬಂಗಾಳದಲ್ಲಿ ಬಿಜೆಪಿಗೆ ದೊಡ್ಡ ಮಟ್ಟದಲ್ಲಿ ಆಶೀರ್ವಾದ ಮಾಡಿದ್ದಾರೆ. ಆ ರಾಜ್ಯದಲ್ಲಿ ಟಿಎಂಸಿ ಆಡಳಿತದಲ್ಲಿ ಜನರು ನರಕಯಾತನೆ ಅನುಭವಿಸುತ್ತಿದ್ದರು. ಆ ನರಕದಿಂದ ಮೋದಿ ಅವರು ಜನರನ್ನು ಹೊರತಂದಿದ್ದಾರೆ. ಈ




ಬಾರಿಯೂ ಬಿಜೆಪಿ ಗೆಲ್ಲದೇ ಇದ್ದಿದ್ದರೆ ಅಲ್ಲಿನ ಜನರ ಸ್ಥಿತಿ ಏನಾಗುತ್ತಿತ್ತು ಎಂದು ಊಹಿಸಿ ಎಂದರು.

ಪಶ್ಚಿಮ ಬಂಗಾಳದಲ್ಲಿ ಗೆದ್ದ ಶಾಸಕರು ಯಾವುದಾದರೂ ರಸ್ತೆಗೆ ಈಗ ಬಂದರೆ ಹೆಣ್ಣು ಮಕ್ಕಳು ಕೈ ಮುಗಿದು ನಮ್ಮನ್ನು ರಕ್ಷಿಸಿ ಎಂದು ಮನವಿ ಮಾಡುತ್ತಿದ್ದಾರೆ. ಮಮತಾ ಅವರ ಆಡಳಿತದಲ್ಲಿ ನಾವು ನರಕ ಅನುಭವಿಸಿದ್ದೇವೆ ಇನ್ನು ಮುಂದೆ ಇಂತಹ ಸ್ಥಿತಿ ಬರದಿರಲಿ ಎಂದು ಹೇಳುತ್ತಿದ್ದಾರೆ. ಅಂದರೆ ಅಲ್ಲಿ ಯಾವ ಸ್ಥಿತಿ ಇತ್ತು ಎಂದು ಯೋಚಿಸಿ ಎಂದು ಹೇಳಿದರು.

ಅಸ್ಸಾಂ ಮತ್ತು ಪುದುಚೇರಿಯಲ್ಲಿ ನಮ್ಮ ಪಕ್ಷಕ್ಕೆ ಜನ ಬೆಂಬಲ ನೀಡಿದ್ದಾರೆ. ತಮಿಳುನಾಡು ಮತ್ತು ಕೇರಳದಲ್ಲಿ ನಮ್ಮ ಪಕ್ಷದ ಕಾರ್ಯಕರ್ತರ ಬೆಂಬಲದಿಂದ ಮತಬ್ಯಾಂಕ್ ಹೆಚ್ಚಿಸಿಕೊಂಡಿದ್ದೇವೆ. ಇನ್ನೂ ಅಲ್ಲಿ ಮುಂದಿನ ಚುನಾವಣೆಯಲ್ಲಿ ಎಲ್ಲಾ ಪಕ್ಷಗಳಂತೆ ಬಿಜೆಪಿ ಶಕ್ತಿ ಹೆಚ್ಚಲಿದೆ. ಸ್ವತಂತ್ರ ಸರ್ಕಾರ ಮಾಡುವ ಶಕ್ತಿಯನ್ನು ಜನರು ಕೊಡ್ತಾರೆ. ಕೇರಳದಲ್ಲಿ ಕಾಂಗ್ರೆಸ್ ಯುಡಿಎಫ್ ಏಳು ಪಕ್ಷಗಳ ಜೊತೆಗೂಡಿದೆ. ತುಂಡು ತುಂಡು ಪಕ್ಷ ಸೇರಿ ಖಿಚಡಿ ಪಕ್ಷ ಆಗಿದೆ ಎಂದು ಗೇಲಿ ಮಾಡಿದರು.

ಪಂಚರಾಜ್ಯ ಚುನಾವಣೆಯಲ್ಲಿ ಪರಿಶಿಷ್ಟ ಜಾತಿ ವರ್ಗದ ಜನ ಹೆಚ್ಚಿನ ಪ್ರಮಾಣದಲ್ಲಿ ಬಿಜೆಪಿಗೆ ಬೆಂಬಲ ನೀಡಿದ್ದಾರೆ. ಆದರೆ ಕಾಂಗ್ರೆಸ್‌ಗೆ ಮುಸ್ಲಿಮರು ಸಾಕಷ್ಟು ಬೆಂಬಲ ಕೊಟ್ಟಿದ್ದಾರೆ.

ಅಸಾಂನಲ್ಲಿ 19 ಜನ ಕಾಂಗ್ರೆಸ್‌ನಿಂದ ಗೆದ್ದಿದ್ದಾರೆ ಇದರಲ್ಲಿ ಒಂದು ಎಸ್‌ಸಿ ಇನ್ನು ಉಳಿದವರು ಮುಸ್ಲಿಮರು. ಕಾಂಗ್ರೆಸ್ ಮುಸ್ಲಿಮರನ್ನು ದಾರಿ ತಪ್ಪಿಸಿ ಬಿಜೆಪಿ ಗುಮ್ಮ ತೋರಿಸುತ್ತಾ ಬಂದಿದೆ. ಮುಸ್ಲಿಮರು ಇಲ್ಲದಿದ್ದರೆ ಕಾಂಗ್ರೆಸ್ ಇಲ್ಲ. ಪಶ್ಚಿಮ ಬಂಗಾಳದಲ್ಲೂ ಬಿಜೆಪಿ ಪರಿಶಿಷ್ಟ ಜಾತಿ ಮತ್ತು ವರ್ಗಗಳಿಗೆ ಅವಕಾಶ ನೀಡಿದೆ ಎಂದರು.

ಕರ್ನಾಟಕದಲ್ಲಿ ಮುಂದೆ ನಡೆಯುವ ಚುನಾವಣೆಯಲ್ಲಿ ಕೂಡ ಪರಿಶಿಷ್ಟ ಜಾತಿ ವರ್ಗಗಳು ಬಿಜೆಪಿಗೆ ಜೊತೆ ನಿಲ್ಲಲಿದ್ದಾರೆ. ಇಲ್ಲಿಯೂ ಕಾಂಗ್ರೆಸ್‌ಗೆ ಪಾಠ ಕಲಿಸಬೇಕು ಎಂದು ಮುಸ್ಲಿಂ ಸಮುದಾಯಗಳು ನಿರ್ಧರಿಸಿವೆ ಎಂದು ನುಡಿದರು.

ಮಾತೆತ್ತಿದರೆ ನಾವು ಅಹಿಂದ ನಾಯಕರು ಎನ್ನುವವರು ಅಹಿಂದ ವರ್ಗಗಳಿಗೆ ಚುನಾವಣೆಯಲ್ಲಿ ಅವಕಾಶ ನೀಡಲಿಲ್ಲ. ಪ್ರಧಾನಿ ನರೇಂದ್ರ ಮೋದಿ ಅವರೂ ಅಹಿಂದ ವರ್ಗದವರು.

ಹಿಂದುಳಿದ ವರ್ಗದಿಂದ ಪ್ರಧಾನಿಯಾದವರು. 25 ವರ್ಷಗಳಿಂದ ಸೋಲದೇ ಒಂದು ದಿನವೂ ರಜೆ ಪಡೆಯದೇ ಕೆಲಸ ಮಾಡುತ್ತಿದ್ದಾರೆ. ಮೋದಿಜಿ ಅವರ ನಾಯಕತ್ವಕ್ಕೆ ಅಹಿಂದ ವರ್ಗದವರು ಬೆಂಬಲ ವ್ಯಕ್ತಪಡಿಸುತ್ತಾ ಇದ್ದಾರೆ. ಇಡೀ ದೇಶದಲ್ಲಿ ಬಿಜೆಪಿಯನ್ನು ಅಹಿಂದ ವರ್ಗಗಳು ಬೆಂಬಲಿಸುತ್ತಿವೆ. ಇದನ್ನು ಇಲ್ಲಿನ ನಾಯಕರು ಅರ್ಥ ಮಾಡಿಕೊಳ್ಳಬೇಕು. ಅಹಿಂದ ನಾಯಕನ ಕೈಲಿ ಬಿಜೆಪಿ ಇಡೀ ದೇಶ ಕೊಟ್ಟಿದೆ ಎಂದರು.

## 'ವೃಷಭಾವತಿ ವ್ಯಾಲಿಯಲ್ಲಿ ಸರಾಗವಾಗಿ ನೀರು ಹರಿದುಹೋಗಲು ವೈಜ್ಞಾನಿಕ ಯೋಜನೆ ರೂಪಿಸಿ'



ಬೆಂಗಳೂರು

ವೃಷಭಾವತಿ ವ್ಯಾಲಿಯಲ್ಲಿ ಸರಾಗವಾಗಿ ನೀರು ಹರಿದುಹೋಗಲು ವೈಜ್ಞಾನಿಕ ಯೋಜನೆ ರೂಪಿಸಲು ಪಶ್ಚಿಮ ನಗರ ಪಾಲಿಕೆ ಆಯುಕ್ತರಾದ ಡಾ.ರಾಜೇಂದ್ರ ಕೆ.ವಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬೆಂಗಳೂರು ಪಶ್ಚಿಮ ನಗರ ಪಾಲಿಕೆ ವಿಜಯನಗರ ವ್ಯಾಪ್ತಿಯಲ್ಲಿ ಇಂದು ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ ಮಾತನಾಡಿದ ಅವರು, ಗಾಳಿ ಆಂಜನೇಯ ದೇವಸ್ಥಾನದ ಬಳಿ ವೃಷಭಾವತಿ ವ್ಯಾಲಿಯನ್ನು ಪರಿಶೀಲಿಸಿ ಹೂಳು, ತ್ಯಾಜ್ಯವನ್ನು ತಕ್ಷಣ ಸ್ವಚ್ಛಗೊಳಿಸಿ ಮಳೆ ನೀರು ಸರಾಗವಾಗಿ ಹರಿದುಹೋಗಲು ಅನುಕೂಲವಾಗುವಂತೆ ಸೂಕ್ತ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು.

ಮಳೆಗಾಲದ ವೇಳೆ ಗಾಳಿ ಆಂಜನೇಯ ದೇವಸ್ಥಾನದ ಬಳಿ ವೃಷಭಾವತಿ ವ್ಯಾಲಿಯಲ್ಲಿ ನೀರಿನ ಹರಿವಿನ ಮಟ್ಟ ಹೆಚ್ಚಾಗಿ ಜಲಾವೃತ ಆಗುವುದನ್ನು ತಪ್ಪಿಸುವ ಸಲುವಾಗಿ, ವ್ಯಾಲಿಯನ್ನು ನಿರಂತರವಾಗಿ ಸ್ವಚ್ಛವಾಗಿರುವಂತೆ ನೋಡಿಕೊಳ್ಳಬೇಕು. ಜೊತೆಗೆ ವ್ಯಾಲಿಗೆ ತ್ಯಾಜ್ಯ ಹಾಕದಂತೆ ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಸೂಚನೆ ನೀಡಿದರು.

ಕವಿಕಾ ಫ್ಯಾಕ್ಟರಿ ಹಿಂಭಾಗ ವೃಷಭಾವತಿ ವ್ಯಾಲಿಯಲ್ಲಿ ಹೂಳೆತ್ತುವ ಕಾರ್ಯವನ್ನು ಪರಿವೀಕ್ಷಿಸಿ, ಮುಂಗಾರು ಸನ್ನಿಹಿತವಾಗುತ್ತಿರುವ ಹಿನ್ನೆಲೆಯಲ್ಲಿ ತ್ವರಿತವಾಗಿ ಕೆಲಸ ಪೂರ್ಣಗೊಳಿಸಲು ಸೂಚನೆ ನೀಡಿದರು.

ಮಳೆಗಾಲದ ವೇಳೆ ಗಾಳಿ ಆಂಜನೇಯ ದೇವಸ್ಥಾನ, ಕವಿಕಾ ಹಾಗೂ ನಾಯಂಡ ಹಳ್ಳಿ ಜಂಕ್ಷನ್ ಭಾಗದಲ್ಲಿ ಜಲಾವೃತ ಆಗುವುದನ್ನು ತಪ್ಪಿಸುವ ಸಲುವಾಗಿ ಹೆಚ್ಚುವರಿ ಯಂತ್ರೋಪಕರಣಗಳನ್ನು ಬಳಸಿಕೊಂಡು ನಿರಂತರವಾಗಿ ಸ್ವಚ್ಛತಾ ಕಾರ್ಯ ನಡೆಸಬೇಕು. ಅಗತ್ಯವಿದ್ದಲ್ಲಿ ಸ್ವಚ್ಛತೆಗಾಗಿ ಹೆಚ್ಚುವರಿ ತಂಡಗಳನ್ನು ನಿಯೋಜಿಸಿಕೊಳ್ಳಲು ಸೂಚನೆ ನೀಡಿದರು.

## ಬೆಂಗಳೂರು ಜನತೆಯ ಪರವಾಗಿ ಮೋದಿ ಜೀಗೆ ಅಭಿನಂದನೆ: ಆರ್.ಅಶೋಕ್

ಬೆಂಗಳೂರು

ಮೇ.10ರಂದು ಆಗಮಿಸುತ್ತಿರುವ ಪ್ರಧಾನಮಂತ್ರಿಗಳಾದ ನರೇಂದ್ರ ಮೋದಿ ಜೀ ಅವರಿಗೆ ಬೆಂಗಳೂರು ಜನತೆಯ ಪರವಾಗಿ ಅಭಿನಂದನೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ವಿಧಾನಸಭೆ ವಿರೋಧಪಕ್ಷದ ನಾಯಕ ಆರ್.ಅಶೋಕ್ ಅವರು ಹೇಳಿದ್ದಾರೆ.

ಬಿಜೆಪಿ ಕಾರ್ಯಾಲಯದಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಪಶ್ಚಿಮ ಬಂಗಾಳದಲ್ಲಿ ನಡೆದ ಚುನಾವಣೆಯಲ್ಲಿ ಬಿಜೆಪಿ ಅಭೂತಪೂರ್ವ ಗೆಲುವು ಸಾಧಿಸಿ ಅಧಿಕಾರಕ್ಕೆ ಬರುತ್ತಿದೆ. ಮೋದಿ ಅವರ ಸಾಧನೆಗೆ ವಿಶ್ವವೇ ಕೊಂಡಾಡುತ್ತಿದೆ. 75 ವರ್ಷಗಳ ನಂತರ ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಸಾಧನೆ ಮಾಡಿದೆ. ಈ ಹಿನ್ನೆಲೆಯಲ್ಲಿ ಪ್ರಧಾನಿಯವರಿಗೆ ಅಭಿನಂದನೆ ಸಲ್ಲಿಸಲಾಗುವುದು ಎಂದರು.



ಬೆಳಗ್ಗೆ 9 ಗಂಟೆಗೆ ಬೆಂಗಳೂರಿನ ಎಚ್‌ಎಎಲ್ ವಿಮಾನ ನಿಲ್ದಾಣಕ್ಕೆ ಆಗಮಿಸುವ ಪ್ರಧಾನಿ, ಅರ್ಧಗಂಟೆ ಕಾಲ ಎಲ್ಲರನ್ನೂ ಉದ್ದೇಶಿಸಿ ಮಾತನಾಡಲಿದ್ದಾರೆ. ನಾಗರಿಕರಿಗೆ ಮುಕ್ತ ಆಹ್ವಾನ ಇದೆ. ಅಭಿನಂದನಾ ಸಮಾರಂಭವನ್ನು ಸಂಭ್ರಮದಿಂದ ಆಚರಿಸಬೇಕು. ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜಿಸಲಾಗುವುದು. ಎಲ್ಲರೂ ಸೇರಿ ಯಶಸ್ವಿಗೊಳಿಸೋಣ ಎಂದು ಮನವಿ ಮಾಡಿದರು.

ತುಮಕೂರಿನಲ್ಲಿ ಇದೇ 9 ರಂದು ಆಯೋಜಿಸಿರುವ ಯಡಿಯೂರಪ್ಪ ಅವರ ಅಭಿಮಾನೋತ್ಸವಕ್ಕೆ ಸಹ ಸಾಕಷ್ಟು ಜನರು ಬರಲಿದ್ದಾರೆ ಎಂದು ವಿವರಿಸಿದರು.

ಆಡಳಿತಾರೂಢ ಪಕ್ಷದ್ದೇ ಗೆಲುವು...

ಎಲ್ಲಾ ಉಪ ಚುನಾವಣೆಗಳಲ್ಲಿ ಆಡಳಿತ ಪಕ್ಷವೇ ಗೆಲುವು ಸಾಧಿಸಿದೆ. ಬಿಜೆಪಿ ಇದ್ದಾಗ ಬಿಜೆಪಿ ಅಭ್ಯರ್ಥಿಗಳು ಗೆಲುವು ಸಾಧಿಸಿದ್ದಾರೆ. ಕಾಂಗ್ರೆಸ್ ಗೆದ್ದಿರುವುದು ದೊಡ್ಡ ವಿಚಾರ ಅಲ್ಲ. ಇದಕ್ಕಿಂತ ಪಶ್ಚಿಮ ಬಂಗಾಳ ಮತ್ತು ಅಸ್ಸಾಂನಲ್ಲಿ ಬಿಜೆಪಿ ಗೆಲುವು ಸಾಧಿಸಿರುವುದು ದೊಡ್ಡದು ಎಂದರು.

ರಾಜ್ಯದಲ್ಲಿ ಒಂದಲ್ಲ ಒಂದು ಉಪ ಚುನಾವಣೆಗಳು ನಡೆಯುತ್ತಲೇ ಇರುತ್ತವೆ. ಈ ಗೆಲುವುಗಳು ಯಾವುದಕ್ಕೂ ಮಾನದಂಡ ಅಲ್ಲ. ಒಮ್ಮೆ ಬಿಜೆಪಿ ಆಡಳಿತವಿದ್ದಾಗ 16 ಕ್ಕೆ 15 ರಲ್ಲಿ ಬಿಜೆಪಿ ಗೆದ್ದಿತ್ತು. ಆದರೆ ನಂತರ ಬಿಜೆಪಿ ಅಧಿಕಾರ ಕಳೆದುಕೊಂಡಿತು. ಜನರ ತೀರ್ಮಾನಕ್ಕೆ ಬದ್ಧರಾಗಬೇಕು ಎಂದರು.

## 'ಪ್ರತಿ 700 ಮಕ್ಕಳಲ್ಲಿ ಒಬ್ಬರಿಗೆ ಸೀಳು ತುಟಿ ಸಮಸ್ಯೆ'

ಮೈಸೂರು

ಸೀಳು ತುಟಿ ಸಮಸ್ಯೆಯಿಂದ ಬಳಲುವ ಪ್ರತಿಯೊಂದು ಮಗುವಿಗೂ ಉತ್ತಮ ಚಿಕಿತ್ಸೆ ಮತ್ತು ಸಮರ್ಪಕ ಆರೈಕೆ ದೊರಕುವುದು ಅವರ ಹಕ್ಕು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಭಾರತೀಯ ವಾಕ್ ಮತ್ತು ಶ್ರವಣ ಸಂಸ್ಥೆ ಹಾಗೂ ಇಂಡಿಯನ್ ಸೊಸೈಟಿ ಆಫ್ ಕ್ಲೆಫ್ಟ್ ಲಿಪ್ ಸಹಯೋಗದಲ್ಲಿ ಆಯೋಜಿಸಲಾದ 24ನೇ ವಾರ್ಷಿಕ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

ಭಾರತದಲ್ಲಿ ಜನಿಸುವ ಪ್ರತಿ 700 ಮಕ್ಕಳಲ್ಲಿ ಒಬ್ಬರಿಗೆ ಸೀಳು ತುಟಿ ಸಮಸ್ಯೆ ಕಂಡುಬರುತ್ತದೆ. ಈ ಸಮಸ್ಯೆಗೆ ಸಮಯೋಚಿತ ಹಾಗೂ ಸರಿಯಾದ ಚಿಕಿತ್ಸೆ ದೊರೆತಾಗ ಮಾತ್ರ ಮಗುವಿನ ಆರೋಗ್ಯ ಮತ್ತು ಭವಿಷ್ಯ ಸುಧಾರಿಸುತ್ತದೆ. ಚಿಕಿತ್ಸೆ ದೊರೆಯದಿದ್ದರೆ ಮಗು ಸಾಮಾಜಿಕ, ಮಾನಸಿಕ, ಹಲ್ಲು ಮತ್ತು ಮಾತಿನ ಸಮಸ್ಯೆಗಳಿಗೆ ಒಳಗಾಗುತ್ತದೆ ಎಂದು ಅವರು ಹೇಳಿದರು.

ಇತ್ತೀಚಿನ ವರ್ಷಗಳಲ್ಲಿ ಈ ಸಮಸ್ಯೆಯ




ಕುರಿತು ಜಾಗೃತಿ ಹೆಚ್ಚುತ್ತಿರುವ ಪರಿಣಾಮ ಪೋಷಕರು ಮಕ್ಕಳಿಗೆ ಚಿಕಿತ್ಸೆ ಕೊಡಿಸಲು ಮುಂದೆ ಬರುತ್ತಿರುವುದು ಸಂತಸದ ಸಂಗತಿಯಾಗಿದೆ. ಇಂತಹ ಸಮ್ಮೇಳನಗಳು ಇನ್ನಷ್ಟು ಹೆಚ್ಚಾಗಿ ನಡೆಯಬೇಕೆಂದು ಅವರು ಅಭಿಪ್ರಾಯಪಟ್ಟರು.

ಸೀಳು ತುಟಿ ಸಮಸ್ಯೆ ಕೇವಲ ಒಬ್ಬ ವೈದ್ಯರಿಂದ ಪರಿಹಾರವಾಗುವುದಿಲ್ಲ. ಶಸ್ತ್ರಚಿಕಿತ್ಸಕರು, ಮಕ್ಕಳ ದಂತ ವೈದ್ಯರು, ಭಾಷಾ ಹಾಗೂ ಮಾತು ತರಬೇತಿ ನೀಡುವ ತಜ್ಞರು ಸೇರಿದಂತೆ ಹಲವರ ಸಮನ್ವಯದ ಸಹಭಾಗಿತ್ವ ಅಗತ್ಯವಿದೆ. ಆಗ ಮಾತ್ರ ಮಗು ಸಾಮಾನ್ಯ ಮಕ್ಕಳಂತೆ ಜೀವನ ನಡೆಸಲು ಸಾಧ್ಯವಾಗುತ್ತದೆ ಎಂದು ಸಚಿವರು ತಿಳಿಸಿದರು.

ಸ್ಮೈಲ್ ಇಂಡಿಯಾ ದೇಶದಾದ್ಯಂತ ಸೀಳು ತುಟಿ ಶಸ್ತ್ರಚಿಕಿತ್ಸೆ ನಡೆಸಿ ಸಾವಿರಾರು ಮಕ್ಕಳ ಬದುಕನ್ನು ಸುಧಾರಿಸುವಲ್ಲಿ ಮಹತ್ವದ ಪಾತ್ರ ವಹಿಸಿದೆ. ವೈದ್ಯರಿಗೆ ಸೂಕ್ತ ತರಬೇತಿ ನೀಡುವ ಕಾರ್ಯದಲ್ಲಿಯೂ ಸಂಸ್ಥೆ ಮುಂಚೂಣಿಯಲ್ಲಿದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರ ಆರೋಗ್ಯ ಕ್ಷೇತ್ರವನ್ನು ಮತ್ತಷ್ಟು ಸಬಲಗೊಳಿಸುವ ಉದ್ದೇಶದಿಂದ ರೋಗ ಪತ್ತೆ ಮತ್ತು ಚಿಕಿತ್ಸೆಗೆ ಹೆಚ್ಚಿನ ಆದ್ಯತೆ ನೀಡುತ್ತಿದೆ. ರಾಜ್ಯದ ಯಾವುದೇ ಮಗು ಮಾಹಿತಿಯ ಕೊರತೆಯಿಂದ ಸೀಳು ತುಟಿ ಸಮಸ್ಯೆಯಿಂದ ಬಳಲಬಾರದು ಎಂಬುದು ಸರ್ಕಾರದ ಉದ್ದೇಶವಾಗಿದೆ ಎಂದು ಹೇಳಿದರು.

ಸಮ್ಮೇಳನದಲ್ಲಿ ಡಾ. ಎಂ. ಪುಷ್ಪವತಿ, ರೇಣು ಮೆಹ್ತಾ ಹಾಗೂ ಡಾ. ಪ್ರೀತಮ್ ಶೆಟ್ಟಿ ಉಪಸ್ಥಿತರಿದ್ದರು.

## ವಿಶೇಷ ರೈಲು ಸೇವೆ ಕಾಯಂ

ಬೆಂಗಳೂರು

ಪೂರ್ವ ಕರಾವಳಿ ರೈಲ್ವೆ ವಿಶಾಖಪಟ್ಟಣಂ ಮತ್ತು ಸರ್ ಎಂ. ವಿಶ್ವೇಶ್ವರಯ್ಯ ಟರ್ಮಿನಲ್ ನಡುವಿನ ವಿಶೇಷ ರೈಲು ಸೇವೆಯನ್ನು ಕಾಯಂ ರೈಲಾಗಿ ಪರಿವರ್ತಿಸಿ ಘೋಷಿಸಿದೆ.

ಈ ಹಿಂದೆ ವಿಶೇಷ ರೈಲು ಸಂಖ್ಯೆ 08581/08582 ಆಗಿ ಸಂಚರಿಸುತ್ತಿದ್ದ ಸೇವೆ, ಇನ್ನುಮುಂದೆ ರೈಲು ಸಂಖ್ಯೆ 18509/18510 ವಿಶಾಖಪಟ್ಟಣಂ–ಎಸ್‌ಎಂವಿಟಿ ಬೆಂಗಳೂರು ಸಾಪ್ತಾಹಿಕ ಎಕ್ಸ್‌ಪ್ರೆಸ್ ಆಗಿ ನಿಯಮಿತವಾಗಿ ಕಾರ್ಯನಿರ್ವಹಿಸಲಿದೆ.

ಈ ಹೊಸ ಸೇವೆ ವಿಶಾಖಪಟ್ಟಣಂನಿಂದ ಮೇ 10, 2026ರಿಂದ ಹಾಗೂ ಬೆಂಗಳೂರಿನಿಂದ ಮೇ 11, 2026ರಿಂದ ಜಾರಿಗೆ ಬರಲಿದೆ. ರೈಲು ಸಂಖ್ಯೆ 18509 ವಿಶಾಖಪಟ್ಟಣಂನಿಂದ ಪ್ರತಿ ಭಾನುವಾರ ಮಧ್ಯಾಹ್ನ 3:20ಕ್ಕೆ ಹೊರಟು, ಮರುದಿನ ಸೋಮವಾರ ಮಧ್ಯಾಹ್ನ 1:50ಕ್ಕೆ ಎಸ್‌ಎಂವಿಟಿ ಬೆಂಗಳೂರಿಗೆ ಆಗಮಿಸಲಿದೆ.

ಅದೇ ರೀತಿ, ರೈಲು ಸಂಖ್ಯೆ 18510 ಎಸ್‌ಎಂವಿಟಿ ಬೆಂಗಳೂರಿನಿಂದ ಪ್ರತಿ ಸೋಮವಾರ ಮಧ್ಯಾಹ್ನ 3:50ಕ್ಕೆ ಹೊರಟು, ಮರುದಿನ ಮಂಗಳವಾರ ಮಧ್ಯಾಹ್ನ 1:30ಕ್ಕೆ ವಿಶಾಖಪಟ್ಟಣಂ ತಲುಪಲಿದೆ.

## ಮಕ್ಕಳಿಗೆ ವಿದ್ಯೆಯ ಜೊತೆಗೆ ಸಂಸ್ಕಾರವೂ ಮುಖ್ಯ: ಶಂಕರಪಾಗೋಜಿ

ಬೆಂಗಳೂರು

ಬೇಸಿಗೆ ಶಿಬಿರಗಳು ಮಕ್ಕಳ ಪ್ರತಿಭೆಯನ್ನು ಅನಾವಣರಗೊಳಿಸುವ ವೇದಿಕೆಗಳು ಎಂದು ಹಿರಿಯ ಪತ್ರಕರ್ತ ಶಂಕರ ಪಾಗೋಜಿ ಅಭಿಪ್ರಾಯ ಪಟ್ಟರು.

ಅವರು ಬೆಂಗಳೂರಿನ ಕಲಾಗ್ರಾಮದಲ್ಲಿ ಕಲಾಭೂಮಿ ಟ್ರಸ್ಟ್ ಏರ್ಪಡಿಸಿದ್ದ ಮಕ್ಕಳ ಬೇಸಿಗೆ ಶಿಬಿರ ಸಮಾರೋಪ ಸಮಾರಂಭ ಮತ್ತು ಪ್ರತಿಭಾ ಪ್ರದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಪಾಲಕರು ಮಕ್ಕಳನ್ನು ಅಂಕಗಳಿಸುವ ಯಂತ್ರಗಳಂತೆ ರೂಪಿಸುತ್ತಿದ್ದಾರೆ. ಅದರಿಂದ ಮಕ್ಕಳು ಮಾನಸಿಕ ಹಿಂಸೆ ಅನುಭವಿಸು ವಂತಾಗಿದೆ.

ಮಕ್ಕಳು ವಿದ್ಯೆಯ ಜೊತೆಗೆ ಸಮಾಜದಲ್ಲಿ ಹೇಗೆ ನಡೆದುಕೊಳ್ಳಬೇಕು, ಹಿರಿಯರಿಗೆ ಹೇಗೆ




ಗೌರವ ಕೊಡಬೇಕು ಎನ್ನುವ ಸಂಸ್ಕಾರವನ್ನೂ ಕಲಿಯಬೇಕು. ಬೇಸಿಗೆ ಶಿಬಿರಗಳಲ್ಲಿ ಮಕ್ಕಳಿಗೆ ನೃತ್ಯ, ಸಂಗೀತ, ನಾಟಕಗಳ ಜೊತೆಗೆ ಬದುಕಿನ ಪಾಠವನ್ನು ಹೇಳಿಕೊಡುತ್ತಾರೆ, ಇಂದಿನ ಮಕ್ಕಳಿಗೆ ವಿದ್ಯೆಯ ಜೊತೆಗೆ ಬುದ್ದಿಯೂ ಅಗತ್ಯವಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದ ಸಾಹಿತಿ ಯೋಗೇಶ್ ಮಾಸ್ಟರ್, ಮಕ್ಕಳಿಗೆ ಹೀಗೆ ಮಾಡು ಎಂದು ಹೇಳುವ ಅಧಿಕಾರ ಮತ್ತು ಹಕ್ಕು ಪಾಲಕರಿಗೆ ಇಲ್ಲ. ನಾವು ಮಕ್ಕಳನ್ನು ನಮ್ಮ ಬಯಕೆಗೆ ತಕ್ಕ ಹಾಗೆ ಬೆಳೆಸಲು ಪ್ರಯತ್ನ ಮಾಡುತ್ತಿದ್ದೇವೆ.

ಮಕ್ಕಳನ್ನು ಅವರು ಬಯಸಿದಂತೆ ಬೆಳೆಯಲು ಬಿಡಿ, ನಾವು ಮಕ್ಕಳನ್ನು ನಮ್ಮ ಕಾಲಕ್ಕೆ ತೆಗೆದುಕೊಂಡು ಹೋಗಲು ಬಯಸುತ್ತಿದ್ದೇವೆ, ನಾವು ಅವರ ಕಾಲಕ್ಕೆ ಅಪ್ ಡೇಟ್ ಆಗಬೇಕು ಎಂದರು.

ಅಖಿಲ ಕರ್ನಾಟಕ ಸಂಗೀತ ಶಿಕ್ಷಕರ ಸಂಘದ ಅಧ್ಯಕ್ಷೆ ಎಸ್. ಎ. ಛಾಯಾ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿ, ಮಕ್ಕಳಿಗೆ ಅವರಲ್ಲಿರುವ ಪ್ರತಿಭೆ ಅನಾವರಣಕ್ಕೆ ಅವಕಾಶ ಕಲ್ಪಿಸಬೇಕು. ನಮ್ಮ ಮಗು ಇದನ್ನೇ ಕಲಿಯಬೇಕು ಎಂದು ಒತ್ತಡ ಹೇರಬಾರದು ಎಂದು ಹೇಳಿದರು.

ಚಿತ್ರನಟ ಮುನಿಕೃಷ್ಣ, ಬಾಲನಟ ಮಾಸ್ಟರ್ ತರುಣ್ ಕಾರ್ಯಕ್ರಮದಲ್ಲಿ ಹಾಜರಿದ್ದರು. ಕಲಾಭೂಮಿ ಸಂಸ್ಥಾಪಕ ಅಧ್ಯಕ್ಷ ಆಸ್ಕರ್ ಕೃಷ್ಣ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಕುಂತಲಾ ಲಕ್ಷ್ಮಣ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಮಕ್ಕಳ ಹಾಡು, ನೃತ್ಯ, ಗುರು ಶಿಷ್ಯರು ಹಾಗೂ ಕಲಾ ಕೌಸ್ತುಭ ತಂಡದಿಂದ ಪೂರ್ಣಿಮಾ ಪವಾರ್ ನಿರ್ದೇಶನದಲ್ಲಿ ಶಂಕರ ಪಾಗೋಜಿ ಬರೆದಿರುವ ಶರಣ ಸಂಸಾರ ನಾಟಕ ಪ್ರದರ್ಶನವಾಯಿತು.

